# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 1138 |
| ಸದಸ್ಯರ ಹೆಸರು : | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ: | 22.09.2022 |
| ಉತ್ತರಿಸುವವರು : | ಮಾನ್ಯ ಮುಖ್ಯಮಂತ್ರಿಗಳು , ಕರ್ನಾಟಕ ಸರ್ಕಾರ |

******

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಮಹತ್ವಾಕಾಂಕ್ಷೆ ಕಾರ್ಯಕ್ರಮ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಇ-ಆಡಳಿತ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಮತ್ತು ಇ-ಆಡಳಿತ ಯೋಜನೆಯಡಿ ರೂಪಿಸಿರುವ ಕಾರ್ಯಕ್ರಮಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು) | ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಇ-ಆಡಳಿತ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲು ಈ ಕೆಳಗಿನ ತಂತ್ರಾಂಶಗಳನ್ನು ಅನುಷ್ಠಾನಗೊಳಿಸಲಾಗಿದೆ.<br><br>1. **ಪಂಚತಂತ್ರ 2.0**<br><br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿಗಳ ಪ್ರತಿನಿತ್ಯದ ಕಾರ್ಯಗಳನ್ನು ಮತ್ತು ಕಾರ್ಯ ಚಟುವಟಿಕೆಗಳನ್ನು ಮೇಲ್ವಿಚಾರಣೆ ಮಾಡಲು ಸೇವೆಗಳ ವಿಲೇವಾರಿಗೆ ಬೇಕಾದ ಯೋಜನೆಗಳ ಅನುಷ್ಠಾನ ಮತ್ತು ತಂತ್ರಾಂಶಗಳನ್ನು ಕೈಗೊಳ್ಳುವಲ್ಲಿ ಮತ್ತು ಗ್ರಾಮ ಪಂಚಾಯತಿಗಳಲ್ಲಿ 2011 ರಿಂದ ಬಳಸಲಾಗುತ್ತಿರುವ ಪಂಚತಂತ್ರ ತಂತ್ರಾಂಶವನ್ನು ಉನ್ನತೀಕರಣಗೊಳಿಸಿ, ಪಂಚತಂತ್ರ 2.0 ತಂತ್ರಾಂಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿವೃದ್ಧಿಪಡಿಸಲಾಗಿದೆ.<br><br>ಪ್ರಸುತ್ತ ಪಂಚತಂತ್ರ 2.0 ತಂತ್ರಾಂಶದ "ತೆರಿಗೆ ಸಂಗ್ರಹಣೆ" **Finance & Accounting, HRMS, Meeting Management** ಮತ್ತು "ನಾಗರೀಕ ಸೇವೆಗಳು" ಮಾಡ್ಯುಲ್ ಗಳನ್ನು ಅಭಿವೃದ್ಧಿಪಡಿಸಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. |

2. **ಗಾಂಧಿ ಸಾಕ್ಷಿ ಕಾಯಕ 2.0**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿವೃದ್ಧಿಪಡಿಸಿದ್ದ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಬಳಕೆಯನ್ನು ದಿನಾಂಕ:03.10.2013 ರಿಂದ ಕಡ್ಡಾಯಗೊಳಿಸಿ ಹಾಗೂ ಇಲಾಖೆಯ ಅಧೀನ ಇಲಾಖೆಗಳಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ ಮತ್ತು ಗ್ರಾಮ ಪಂಚಾಯತಿಗಳಿಂದ ಅನುಷ್ಠಾನವಾಗುವ ಎಲ್ಲಾ ಕಾಮಗಾರಿಗಳ ಭೌತಿಕ ಮತ್ತು ಆರ್ಥಿಕ ಪ್ರಗತಿಯನ್ನು ಅಳವಡಿಸಿ, ಸದರಿ ತಂತ್ರಾಂಶದಿಂದ ಸೃಜಿಸಲಾಗುವ ಪಾವತಿ ಆದೇಶದ ಮೂಲಕ ಪಾವತಿಸಲು ಕಡ್ಡಾಯಗೊಳಿಸಲಾಗಿತ್ತು.

ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಇಲಾಖೆಯ ಅಧೀನ ಇಲಾಖೆಗಳು ಅನುಷ್ಠಾನ ಮಾಡುವ ಕಾಮಗಾರಿಗಳ ವಿವರಗಳನ್ನು secondary entry ಯ ಮೂಲಕ ಅಳವಡಿಸಲಾಗುತ್ತಿತ್ತು. ಹಲವಾರು ಬಾರಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಗುತ್ತಿಗೆದಾರರಿಗೆ ಪಾವತಿ ಮಾಡುವ ವೇಳೆಯಲ್ಲಿ ಸದರಿ ಕಾಮಗಾರಿಗಳ ಭೌತಿಕ ಪ್ರಗತಿಯ ವಿವರಗಳನ್ನು ಅಳವಡಿಸಿ, ಪಾವತಿ ಆದೇಶವನ್ನು ಸೃಜಿಸಿ ಗುತ್ತಿಗೆದಾರರಿಗೆ ಪಾವತಿಸಲಾಗುತ್ತಿತ್ತು. ಇಂದರಿಂದಾಗಿ ಕಾಮಗಾರಿಗಳ ಭೌತಿಕ ಮತ್ತು ಆರ್ಥಿಕ ಪ್ರಗತಿಯು ಯಾವ ಹಂತದಲ್ಲಿ ಇದೆ ಎಂಬುದರ ನಿಖರವಾದ ಮಾಹಿತಿಯು ಸರ್ಕಾರದ ಹಂತದಲ್ಲಿ ಲಭ್ಯವಾಗುತ್ತಿರಲಿಲ್ಲ.

ಆದುದರಿಂದ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿರುವ ನ್ಯೂನತೆಗಳನ್ನು ಸರಿಪಡಿಸಲು ಹಾಗೂ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶವನ್ನು ಉನ್ನತೀಕರಣಗೊಳಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ನಿರ್ಧರಿಸಿ, "ಗಾಂಧಿ ಸಾಕ್ಷಿ ಕಾಯಕ 2.0"

| | | |
|---|---|---|
| | | ತಂತ್ರಾಂಶವನ್ನು ಅಭಿವೃದ್ಧಿಪಡಿಸಿ, ಮೊದಲನೇ ಹಂತದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನ ಇಲಾಖೆಗಳಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಮತ್ತು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಕಛೇರಿಗಳಲ್ಲಿ ಅನುಷ್ಠಾನ ಮಾಡಲಾಗಿದೆ.<br><br>**3. ಇ-ಬೆಳಕು**<br><br>ಗ್ರಾಮ ಪಂಚಾಯತಿಗಳು ವಿದ್ಯುತ್ ಸರಬರಾಜು ಕಂಪನಿಗಳಿಗೆ ನಿಗದಿತ ಸಮಯದೊಳಗೆ ಬಾಕಿ ಮೊತ್ತವನ್ನು ಆನ್-ಲೈನ್ ಮೂಲಕ ಪಾವತಿಸಲು, ಗ್ರಾಮ ಪಂಚಾಯತಿಗಳು ಕುಡಿಯುವ ನೀರು ಮತ್ತು ಬೀದಿ ದೀಪ ಸ್ಥಾವರಗಳಿಗೆ ಮೀಟರ್ ಗಳನ್ನು ಅಳವಡಿಸಲಾಗಿದೆಯೇ, ಅಳವಡಿಸಿ ಕಾರ್ಯನಿರ್ವಹಿಸದೆ ಇರುವ ಮೀಟರ್ ವಿವರಗಳನ್ನು ಇಂಧೀಕರಿಸಲು, ಕಾರ್ಯನಿರ್ವಹಿಸದೆ ಇರುವ ಕುಡಿಯುವ ನೀರು ಮತ್ತು ಬೀದಿ ದೀಪ ಸ್ಥಾವರಗಳ ಸಂಪರ್ಕವನ್ನು ನಿಷ್ಕ್ರಿಯಗೊಳಿಸಲು ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಆನ್-ಲೈನ್ ಮೂಲಕ ಸಲ್ಲಿಸುವಂತೆ ಅನುವು ಮಾಡಿಕೊಡುವ ಉದ್ದೇಶದಿಂದ "ಇ-ಬೆಳಕು" ತಂತ್ರಾಂಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿವೃದ್ಧಿಪಡಿಸಲಾಗಿದೆ.<br><br>ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ರವರ ಸಹಯೋಗದೊಂದಿಗೆ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ರವರ ತಂತ್ರಾಂಶದೊಂದಿಗೆ "ಇ-ಬೆಳಕು" ತಂತ್ರಾಂಶವನ್ನು ಸಂಯೋಜನೆ ಮಾಡಲಾಗಿದೆ. ಮೊದಲನೇ ಹಂತದಲ್ಲಿ ದಿನಾಂಕ:06.01.2022 ರಿಂದ "ಇ-ಬೆಳಕು" ತಂತ್ರಾಂಶವನ್ನು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ವ್ಯಾಪ್ತಿಗೆ ಬರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಮತ್ತು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಛೇರಿಗಳಲ್ಲಿಅನುಷ್ಠಾನಗೊಳಿಸಲಾಗಿದೆ. |

| | | |
|---|---|---|
| ಆ) | ರಾಜ್ಯದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಇ-ಆಡಳಿತ ವ್ಯವಸ್ಥೆಯನ್ನು ಜಾರಿಗೆ ತಂದ ಮೇಲೆ ಈ ಸಂಸ್ಥೆಗಳಲ್ಲಿ ಯೋಜನೆ ಅನುಷ್ಠಾನ, ಮಾಹಿತಿ ಮತ್ತು ಲೆಕ್ಕ-ಪತ್ರ ನಿರ್ವಹಣೆಯಲ್ಲಿ ಆಗಿರುವ ಬದಲಾವಣೆ ಬಗ್ಗೆ ಸರ್ಕಾರ ಯಾವುದಾದರೂ ಅಧ್ಯಯನ ಮತ್ತು ಸಮೀಕ್ಷೆ ನಡೆಸಿದೆಯೇ; ಹಾಗಿದ್ದಲ್ಲಿ, ಈ ಅಧ್ಯಯನ ಮತ್ತು ಸಮೀಕ್ಷೆಯಿಂದ ಹೊರಬಂದಿರುವ ಮುಖ್ಯ ಅಂಶಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು) | ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಹೊಸ ತಂತ್ರಾಂಶಗಳಾದ ಪಂಚತಂತ್ರ 2.0, ಗಾಂಧಿ ಸಾಕ್ಷಿ ಕಾಯಕ 2.0 ಮತ್ತು ಇ-ಬೆಳಕು ಅನುಷ್ಠಾನ ಹಂತದಲ್ಲಿರುವುದರಿಂದ ಈವರೆಗೆ ಯೋಜನೆ ಅನುಷ್ಠಾನ, ಮಾಹಿತಿ ಮತ್ತು ಲೆಕ್ಕ-ಪತ್ರ ನಿರ್ವಹಣೆಯಲ್ಲಿ ಆಗಿರುವ ಬದಲಾವಣೆ ಬಗ್ಗೆ ಅಧ್ಯಯನ ಮತ್ತು ಸಮೀಕ್ಷೆಗಳನ್ನು ನಡೆಸಿರುವುದಿಲ್ಲ. ಮುಂದಿನ ದಿನಗಳಲ್ಲಿ ಅಧ್ಯಯನ ಮತ್ತು ಸಮೀಕ್ಷೆಗಳನ್ನು ನಡೆಸಲಾಗುವುದು. |
| ಇ) | ರಾಜ್ಯದಲ್ಲಿ ಇ-ಆಡಳಿತ ವ್ಯವಸ್ಥೆಯನ್ನು ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ ಆರ್ಥಿಕ ನೆರವಿನೊಂದಿಗೆ ಯಾವ ಅನುಪಾತದಲ್ಲಿ ಅನುಷ್ಠಾನಗೊಳಿಸುತ್ತಿದೆ ಮತ್ತು ಈ ವ್ಯವಸ್ಥೆಗೆ ಕೇಂದ್ರ ಸರ್ಕಾರದಿಂದ ಇದುವರೆಗೆ ದೊರೆತಿರುವ ಅನುದಾನವೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಇ-ಆಡಳಿತ ವ್ಯವಸ್ಥೆಗೆ ಕೇಂದ್ರ ಸರ್ಕಾರದಿಂದ ಆರ್ಥಿಕ ನೆರವನ್ನು ನೀಡಲಾಗಿರುವುದಿಲ್ಲ. |

ಸಂಖ್ಯೆ: ಗ್ರಾಅಪ/83/ಇ-ಆಡಳಿತ/2022

(ಬಸವರಾಜ ಬೊಮ್ಮಾಯಿ)

ಮುಖ್ಯಮಂತ್ರಿ